



ಅರುಣ ಪಿ. ಭಟ್ಟ

## ವಾರಭವಿಷ್ಯ 29.4.2021ರಿಂದ 5.5.2021ರವರೆಗೆ




ನೀವು ಕೈಗೊಳ್ಳುವ ಕೆಲಸದಿಂದ ವಿಶ್ವಾಸಾರ್ಹತೆ ಹೆಚ್ಚಾಗುತ್ತದೆ. ಆದರೆ ಕೆಲವು ವ್ಯಕ್ತಿಗಳು ನಿಮ್ಮನ್ನು ಅವಮಾನಕ್ಕೆ ಗುರಿ ಮಾಡಲಿದ್ದಾರೆ. ವಾರದ ಅಂತ್ಯಕ್ಕೆ ಸರಿಯುತ್ತಾ ಆರೋಗ್ಯ ಉತ್ತಮವಾಗಿದ್ದು, ಸಂತೋಷವಾಗಿ ಸಮಯ ಕಳೆಯಲಿದ್ದೀರಿ. ನಿಮ್ಮ ಕೆಲಸದ ಜತೆಜತೆಗೆ ಆಹಾರ ಪಥ್ಯದ ಬಗ್ಗೆಯೂ ಕಾಳಜಿ ತೆಗೆದುಕೊಳ್ಳುತ್ತೀರಿ. ವ್ಯಾಪಾರಸ್ಥರಿಗೆ ಉತ್ತಮ ಲಾಭ. ಶುಭದಿನ 1. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ನಿಮ್ಮ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುವವರ ಸಂಖ್ಯೆ ಹೆಚ್ಚಾಗುತ್ತದೆ. ವ್ಯಾಪಾರ ವ್ಯವಹಾರಗಳಲ್ಲೂ ಮುಂದಿರುತ್ತೀರಿ. ತಾಂತ್ರಿಕ ಸಲಕರಣೆ, ಕೆಲಸಗಾರರು ಸಮಯಕ್ಕೆ ಸಿಗದಿರುವುದು ಇಂಥ ಕಾರಣಗಳಿಗೆ ತಡ ತೊಂದರೆ ಆಗುತ್ತದೆ. ಕೋರ್ಟ್ ಕೇಸುಗಳಲ್ಲಿ ಸಮಸ್ಯೆಗಳನ್ನು ಎದುರಿಸುತ್ತೀರಿ. ವಿರೋಧಿ ಪಾಳಯದ ಪಿತೂರಿಯಿಂದ ಹಿನ್ನಡೆ ಅನುಭವಿಸಬೇಕಾಗುತ್ತದೆ. ಶುಭದಿನ 4. ಕಾಲಭೈರವನ ಸೇವೆ ಮಾಡಿರಿ.




ವಾರದ ಆರಂಭದಿಂದಲೇ ಹಲವು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕಾಗುತ್ತದೆ. ಸಂಬಂಧಿಕರ ಜತೆಗೆ ಉತ್ತಮ ಸಮಯ ಕಳೆಯುವ ಸಾಧ್ಯತೆ ಇದೆ. ಈ ವಾರ ಸ್ವಲ್ಪ ಹೆಚ್ಚೇ ಹಣ ಖರ್ಚು ಮಾಡಬೇಕಾಗುತ್ತದೆ. ತಲೆ ನೋವು ಹಲ್ಲು ನೋವು ಕಾಡಬಹುದು. ವಾರದ ಅಂತ್ಯಕ್ಕೆ ಸರಿಯುತ್ತಾ ಆಸ್ತಿ, ಕೋರ್ಟ್ ಕಟಕಟೆ ವ್ಯಾಜ್ಯಗಳನ್ನು ಬಗೆಹರಿಸಿಕೊಳ್ಳಲು ಅವಕಾಶ ದೊರೆಯುತ್ತದೆ. ಶುಭದಿನ 2. ಈಶ್ವರನಿಗೆ ರುದ್ರಾಭಿಷೇಕ ಮಾಡಿಸಿ.




ವ್ಯಾಪಾರಸ್ಥರು ಹೊಸ ಉತ್ಪನ್ನಗಳನ್ನು ಮಾರುಕಟ್ಟೆಯಲ್ಲಿ ಮಾರಾಟ ಮಾಡಲು ಸಕಾಲ. ಮಕ್ಕಳ ಮದುವೆ ವಿಚಾರವಾಗಿ ಸಂಬಂಧಿಕರ ಜತೆಗೆ ಮಾತುಕತೆ ನಡೆಸಲಿದ್ದೀರಿ. ತುರ್ತು ಕೆಲಸಗಳನ್ನು ಪೂರ್ಣಗೊಳಿಸುವಲ್ಲಿ ನಿಮ್ಮ ಗಮನ ಕೇಂದ್ರೀಕೃತವಾಗಿರುತ್ತದೆ. ಇದಕ್ಕಾಗಿ ಕೆಲವು ಸಂಸ್ಥೆ ಅಥವಾ ವ್ಯಕ್ತಿಗಳ ಸಹಾಯ ಪಡೆಯುವ ಸಾಧ್ಯತೆ ಇದೆ. ಆರೋಗ್ಯ ಸಮಸ್ಯೆ ಕಾಡಬಹುದು. ಶುಭದಿನ 1. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಕ್ಕೆ ವೇಗ ನೀಡಲು ಪ್ರಯತ್ನ ಮಾಡುತ್ತೀರಿ. ನೀವು ಹಾಕಿದ ಶ್ರಮಕ್ಕೆ ತಕ್ಕ ಪ್ರತಿಫಲವನ್ನು ಪಡೆಯಲಿದ್ದೀರಿ. ಇತರರ ಸಮಸ್ಯೆಗಳನ್ನು ಬಗೆಹರಿಸಲು ಹೊಸ ದಾರಿಗಳನ್ನು ಸೂಚಿಸುತ್ತೀರಿ. ನೀವು ಕೆಲಸ ಮಾಡುವ ರೀತಿಗೆ ಸಹೋದ್ಯೋಗಿಗಳು, ಮೇಲಧಿಕಾರಿಗಳ ಜವಾಬ್ದಾರಿ ಎಚ್ಚರಗೊಳ್ಳುತ್ತದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯವು ಉತ್ತಮವಾಗಿ ಇರುತ್ತದೆ. ಶುಭದಿನ 4. ಲಿಂಗಾಷ್ಟಕ ಪಠಣ ಮಾಡಿರಿ.




ನಿಮ್ಮ ವಿವೇಚನೆಯನ್ನು ಸಮರ್ಥವಾಗಿ ಬಳಸುವ ಮೂಲಕ ವ್ಯವಹಾರವನ್ನು ಇನ್ನಷ್ಟು ಉತ್ತಮವಾಗಿ ಮಾಡುತ್ತೀರಿ. ಇನ್ನು ಈ ಅವಧಿಯಲ್ಲಿ ಕುಟುಂಬ ಸದಸ್ಯರ ಬಗ್ಗೆ ಹೆಚ್ಚು ಗಮನ ನೀಡುತ್ತೀರಿ. ಉದ್ಯೋಗಸ್ಥರಿಗೆ ಉದ್ಯೋಗ ಸ್ಥಳದಲ್ಲಿ ಸಹೋದ್ಯೋಗಿಗಳ ಜತೆಗೆ ಉದ್ವಿಗ್ನವಾದ ಸನ್ನಿವೇಶ ಎದುರಾಗುತ್ತದೆ. ಈ ಅವಧಿಯಲ್ಲಿ ಆರೋಗ್ಯ ಸಮಸ್ಯೆಗಳು ಎದುರಾಗಬಹುದು. ಶುಭದಿನ 1. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಈ ವಾರ ಕೌಟುಂಬಿಕ ಹಾಗೂ ವೈಯಕ್ತಿಕ ಸಮಸ್ಯೆಗಳ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಿ. ಸಣ್ಣ ವಿಚಾರ ಕೂಡ ದೊಡ್ಡ ಬಿಕ್ಕಟ್ಟಾಗಬಹುದು. ಕೌಟುಂಬಿಕ ವಿಚಾರದಲ್ಲಿ ಕ್ರಮೇಣವಾಗಿ ಪ್ರಗತಿ ಕಾಣುತ್ತದೆ. ವಾರದ ದ್ವಿತೀಯಾರ್ಧದಲ್ಲಿ ದಾನ ಧರ್ಮ ಕಾರ್ಯಗಳಲ್ಲಿ ತೊಡಗಿಸಿಕೊಳ್ಳುತ್ತೀರಿ. ಉದ್ಯೋಗ ಕ್ಷೇತ್ರದಲ್ಲಿ ಅತ್ಯುತ್ತಮವಾದ ಪ್ರಗತಿ ಇದೆ. ಶುಭದಿನ 3. ಸೌಂದರ್ಯ ಲಹರಿ ಪಠಿಸಿರಿ.




ವಾರದ ಮೊದಲ ಭಾಗದಿಂದಲೇ ಆರೋಗ್ಯವಾಗಿ ಇರುತ್ತೀರಿ. ಬಹಳ ಮುಖ್ಯವಾದ ವ್ಯವಹಾರವೊಂದರ ಭಾಗೀದಾರರಾಗಿ ಅಥವಾ ನೀವೇ ಮುಖ್ಯ ಸ್ಥಾನಕ್ಕೆ ನೇಮಕ ಸಾಧ್ಯತೆ ಇದೆ. ರಾಜಕಾರಣಿಗಳಿಗೆ ಹೆಚ್ಚಿನ ಜವಾಬ್ದಾರಿ ವಹಿಸಿಕೊಳ್ಳಬೇಕಾಗುತ್ತದೆ. ಖರೀದಿಸಬೇಕು ಎಂದುಕೊಂಡ ಭೂಮಿಯೊಂದರ ಪರಿಶೀಲನೆ ನಡೆಸುವ ಸಾಧ್ಯತೆ ಇದೆ. ಶುಭದಿನ 2. ಲಕ್ಷ್ಮೀ ನಾರಾಯಣ ಹೃದಯ ಪಠಿಸಿರಿ.




ನಿಮ್ಮ ಕಾರ್ಯಗಳನ್ನು ಈ ಹಿಂದೆಂದಿಗಿಂತಲೂ ವೇಗವಾಗಿ ಮಾಡಲಿದ್ದೀರಿ. ಈಗಿನ ಪರಿಸ್ಥಿತಿಯಲ್ಲಿ ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣ ಮಾಡಲು ಹೆಚ್ಚು ಹಣ ಖರ್ಚು ಮಾಡಬೇಕಾಗುತ್ತದೆ. ನಿಮ್ಮ ಮನಸಿನಲ್ಲಿ ಇರುವ ವಿಚಾರವನ್ನು ನೇರವಾಗಿ ಹೇಳಲು ಪ್ರಯತ್ನಿಸಿ. ಸಮಸ್ಯೆಗಳು ಬಗೆಹರಿಸುವುದು ಕಷ್ಟವಾಗುತ್ತದೆ. ಉದ್ಯೋಗದ ಕಡೆಗೆ ನಿಮ್ಮ ಗಮನ ಹೆಚ್ಚಾಗುತ್ತದೆ. ಶುಭದಿನ 2. ವಿಷ್ಣು ಸಹಸ್ರನಾಮ ಓದಿರಿ.




ಈ ವಾರ ಬಹಳ ಸಂತೋಷವಾಗಿ ಇರುತ್ತೀರಿ. ಆದಾಯಕ್ಕೆ ಸಂಬಂಧಿಸಿದ ಮೂಲಗಳಿಂದ ಉತ್ತಮ ಲಾಭ ಪಡೆಯುವ ಅವಕಾಶ ಇದೆ. ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಯಶಸ್ಸು ಪಡೆಯುವ ಅವಕಾಶಗಳು ದೊರೆಯಲಿವೆ. ಸ್ಪರ್ಧೆ ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಇರುವವರು ಅತ್ಯುತ್ತಮ ಸಾಧನೆ ಮಾಡಲು ಅವಕಾಶ ದೊರೆಯಲಿದೆ. ಶುಭದಿನ 1. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವಾರದ ಶುರುವಿನಿಂದಲೇ ಉದ್ಯೋಗ ಕ್ಷೇತ್ರದಲ್ಲಿ ಅದ್ಭುತವಾದ ಸಾಧನೆ ಮಾಡುವ ಅವಕಾಶಗಳಿವೆ. ನಿಮ್ಮ ಪಾಲಿಗೆ ದೊರೆಯುವ ಅವಕಾಶಗಳನ್ನು ಬಹಳ ಚೆನ್ನಾಗಿ ಬಳಸಿಕೊಳ್ಳಲಿದ್ದೀರಿ. ವ್ಯಾಪಾರಸ್ಥರು ಸ್ಥಳೀಯವಾಗಿ ವಿಶ್ವಾಸಾರ್ಹತೆಯನ್ನು ಹೆಚ್ಚಿಸಿಕೊಳ್ಳುತ್ತೀರಿ. ವಾರದ ಆರಂಭದಲ್ಲಿ ಆರೋಗ್ಯ ಉತ್ತಮವಾಗಿ ಇರುತ್ತದೆ. ನಿಮ್ಮ ಪೋಷಕರಿಗೆ ಹೆಚ್ಚಿನ ಗೌರವ ನೀಡುತ್ತೀರಿ. ಶುಭದಿನ 4. ಸುಬ್ರಮಣ್ಯ ಜಪ ಮಾಡಿರಿ.




ಸಂಸ್ಥೆಯೊಂದರ ಜತೆ ಮಹತ್ತರವಾದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆ ಇದೆ. ಮನೆ ಹಾಗೂ ಕುಟುಂಬದ ಬಗ್ಗೆ ಹೆಚ್ಚು ಯೋಚನೆ ಮಾಡಲಿದ್ದೀರಿ. ಶ್ವಾಸಕೋಶ ಸಮಸ್ಯೆ ಎದುರಾಗಬಹುದು. ವಾರದ ಮಧ್ಯಭಾಗದಿಂದ ಹಲವು ಒಳ್ಳೆ ಅವಕಾಶಗಳು ನಿಮ್ಮ ಪಾಲಿಗೆ ದೊರೆಯಲಿವೆ. ವಿದ್ಯಾರ್ಥಿಗಳಿಗೆ ಪ್ರಗತಿ ಇದೆ. ಆದಾಯದಲ್ಲಿ ಹೆಚ್ಚಳ ಆಗುತ್ತದೆ. ಶುಭದಿನ 2. ಶ್ರೀ ದುರ್ಗಾ ಆರಾಧನೆ ಮಾಡಿರಿ.